(೪) ೧೯೮೬ನೇ ಇಸವಿಯ ಕರ್ನಾಟಕ ವ್ಯವಸಾಯ ಆದಾಯ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕ.

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎ. ಲಕ್ಷ್ಮೀಸಾಗರ್(ಮಾನ್ಯ ಕಾನೂನು ಮತ್ತು ಸಂಸದೀಯ ಸಚಿವರು).—"೧೯೮೬ನೇ ಕರ್ನಾಟಕ ವ್ಯವಸಾಯ ಆದಾಯ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಶ್ರೀ ಎ. ಲಕ್ಷ್ಮೀಸಾಗರ್(ಮಾನ್ಯ ಕಾನೂನು ಮತ್ತು ಸಂಸದೀಯ ಸಚಿವರು).—ಸನ್ಮಾನ್ಯ ಅಧ್ಯಕ್ಷರೇ ಇದರಲ್ಲಿ ಕೆಲವು ಸಣ್ಣ ತಿದ್ದುಪಡಿಗಳನ್ನು ತಂದಿದ್ದೇವೆ. ಈಗ ಏನು ತೆರಿಗೆ ಸೋರಿ ಹೋಗುತ್ತಿದೆ ಎಂದನ್ನು ತಡೆಗಟ್ಟಲು ಕೆಲವು ತಿದ್ದುಪಡಿಗಳನ್ನು ಮಾಡಿದ್ದೇವೆ. ಕೇಂದ್ರ ಸರ್ಕಾರದ ಇನ್‌ಕಮ್ ಟ್ಯಾಕ್ಸ್ ಆಕ್ಟ್ ರೀತಿ ತಂದಿದ್ದೇವೆ. ಆದ್ದರಿಂದ ಇದಕ್ಕೆ ಅನುಮತಿ ಕೊಡಬೇಕೆಂದು ಕೇಳಿಕೊಳ್ಳುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ "೧೯೮೬ನೇ ಇಸವಿಯ ಕರ್ನಾಟಕ ವ್ಯವಸಾಯ ಆದಾಯ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು.

ಪ್ರಸ್ತಾವ ಅಂಗೀಕರಿಸಲಾಯಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ ೨ ರಿಂದ ೧೦ ರವರೆಗೆ

ಅಧ್ಯಕ್ಷರು.— ಖಂಡ ೨ ರಿಂದ ೧೦ ರವರೆಗೆ ಎರಡೂ ಸೇರಿದಂತೆ ವಿಧೇಯಕದ ಅಂಗವಾಗಿರುತ್ತದೆ,

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ೨ ರಿಂದ ೧೦ ರವರೆಗೆ ಎರಡೂ ಸೇರಿದಂತೆ ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು

ಖಂಡ ೧ ಇತ್ಯಾದಿ

ಅಧ್ಯಕ್ಷರು. —ಪ್ರಸ್ತಾವ ಏನೆಂದರೆ ಮೊದಲನೆ ಖಂಡ ದೀರ್ಘಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ,

ಪ್ರಸ್ತಾವವು ಅಂಗೀಕರಿಸಲ್ಪಟ್ಟಿತು.

ಮೊದಲನೆ ಖಂಡ ದೀರ್ಘಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು

ಪ್ರಸ್ತಾವದ ಅಂಗೀಕಾರ

ಶ್ರೀ ಎ. ಲಕ್ಷ್ಮೀಸಾಗರ್ (ಮಾನ್ಯ ಕಾನೂನು ಮತ್ತು ಸಂಸದೀಯ ಸಚಿವರು).—"೧೯೮೬ನೇ ಕರ್ನಾಟಕ ವ್ಯವಸಾಯ ಆದಾಯ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು".

ಅಧ್ಯಕ್ಷರು,—ಪ್ರಸ್ತಾವ ಏನೆಂದರೆ ಕರ್ನಾಟಕ ವ್ಯವಸಾಯ ಆದಾಯ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕ ೧೯೮೬ನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಸರ್ವಾನುಮತದಿಂದ ಒಪ್ಪಿಗೆ ನೀಡಲಾಯಿತು.